**All India Radio: Bangalore**
**Regional Bulletin In Kannada**
**25.10.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**25.10.2025 / 2.30 p.m.**
**<><><><>**

ಮುಖ್ಯಾಂಶಗಳು

1. ಕಿತ್ತೂರು ವಿಜಯೋತ್ಸವಕ್ಕೆ ಇಂದು ತೆರೆ : ಸಂಜೆ ನಡೆಯುವ ಸಮಾರೋಪ ಸಮಾರಂಭದಲ್ಲಿ ಮುಖ್ಯಮಂತ್ರಿ ಭಾಗಿ
2. ರಾಜ್ಯದ ೧೨ ನದಿಗಳ ನೀರು ಕಲುಷಿತ ; ಗುಣಮಟ್ಟದ ಪರಿಶೀಲನೆ ಪ್ರಗತಿಯಲ್ಲಿ - ಶಾಸಕ ಪಿ.ಎಂ. ನರೇಂದ್ರ ಸ್ವಾಮಿ
3. ಶಬರಿಮಲೈ ಚಿನ್ನ ಕಳ್ಳತನ ಪ್ರಕರಣ ; ಬಳ್ಳಾರಿಯ ಆಭರಣ ಮಳಿಗೆಯಿಂದ ೪೦೦ ಗ್ರಾಂ ಚಿನ್ನ ವಶಪಡಿಸಿಕೊಂಡ ಎಸ್‌ಐಟಿ
4. ಬೆಂಗಳೂರಿನಲ್ಲಿ ಸಿಲಿಂಡರ್ ಸ್ಫೋಟ; ಓರ್ವ ವೃದ್ಧೆ ಸಾವು, ಮೂವರಿಗೆ ಗಂಭೀರ ಗಾಯ, ಮನೆ ಕುಸಿತ

<><><><>

ಕಿತ್ತೂರು ಕೋಟೆ ಆವರಣದಲ್ಲಿ ಆಯೋಜಿತ, ಮೂರು ದಿನಗಳ ಕಿತ್ತೂರು ವಿಜಯೋತ್ಸವಕ್ಕಿಂದು ತೆರೆ ಬೀಳಲಿದೆ. ಕಿತ್ತೂರು ರಾಣಿ ಚೆನ್ನಮ್ಮಳ ವಿಜಯೋತ್ಸವದ ೨೦೧ನೇ ವಾರ್ಷಿಕೋತ್ಸವವನ್ನು ಸಂಭ್ರಮಿಸುವ ಕಿತ್ತೂರು ಉತ್ಸವದ ಸಮಾರೋಪ ಸಮಾರಂಭದಲ್ಲಿಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭಾಗವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ರಾಜ್ಯ ಸಚಿವರು ಮತ್ತಿತರ ಗಣ್ಯರು ಪಾಲ್ಗೊಳ್ಳುವ ನಿರೀಕ್ಷೆಯಿದೆ.

<><><><>

ರಾಜ್ಯದ ೧೨ ನದಿಗಳ ನೀರು ಕಲುಷಿತವಾಗಿದ್ದು, ಈ ಬಗ್ಗೆ ನದಿಗಳ ನೀರಿನ ಗುಣಮಟ್ಟ ಪರಿಶೀಲನೆ ನಡೆಸಲಾಗುತ್ತಿದೆ ಹಾಗೂ ಇದಕ್ಕೆ ಕಾರಣಗಳನ್ನು ತಿಳಿದುಕೊಳ್ಳುವ ಪ್ರಯತ್ನ ಮಾಡಲಾಗುತ್ತಿದೆ ಎಂದು ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ಹಾಗೂ ಶಾಸಕ ಪಿ.ಎಂ.ನರೇಂದ್ರಸ್ವಾಮಿ ಹೇಳಿದ್ದಾರೆ. ಮಂಡ್ಯ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾವ ಕಾರಣಕ್ಕೆ ನದಿ ನೀರು ಮಲಿನವಾಗುತ್ತಿದೆ ಎಂಬುದನ್ನು ಪತ್ತೆಹಚ್ಚಲಾಗುತ್ತಿದೆ. ಕೈಗಾರಿಕೆ, ಚರಂಡಿ, ನಗರದ ಕಲುಷಿತ ನೀರಿನಿಂದಾಗಿ ನದಿನೀರು ಮಲಿನವಾಗುತ್ತಿದೆ ಎಂಬುದು ಮೇಲ್ನೋಟಕ್ಕೆ ಕಂಡು ಬಂದಿದ್ದು, ಈ ಬಗ್ಗೆ ಪರಿಶೀಲನೆ ನಡೆಸಿ ನಂತರ ತೀರ್ಮಾನ ಕೈಗೊಳ್ಳಾಗುವುದು ಎಂದರು.

**ಧ್ವನಿ : ಪಿ.ಎಂ.ನರೇಂದ್ರಸ್ವಾಮಿ (೩೭ ಸೆಕೆಂಡ್‌ಗಳು)**

<><><><>

ಶಬರಿಮಲೈ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಮಹತ್ವದ ಬೆಳವಣಿಗೆಯೊಂದರಲ್ಲಿ ವಿಶೇಷ ತನಿಖಾ ತಂಡ ಎಸ್‌ಐಟಿ ಬಳ್ಳಾರಿಯಲ್ಲಿರುವ ಆಭರಣ ಮಳಿಗೆಯೊಂದರಿಂದ ಕದ್ದ ಚಿನ್ನದ ಗಮನಾರ್ಹ ಪಾಲನ್ನು

ವಶಪಡಿಸಿಕೊಂಡಿದೆ. ಪ್ರಮುಖ ಆರೋಪಿ ಉನ್ನಿಕೃಷ್ಣನ್ ಪೊಟ್ಟಿ, ತನ್ನ ಸಹಚರ ಗೋವರ್ಧನ್‌ಗೆ ಹಸ್ತಾಂತರಿಸಿದ್ದ ಎನ್ನಲಾದ ಚಿನ್ನವನ್ನು ಪೊಲೀಸ್ ವರಿಷ್ಠಾಧಿಕಾರಿ ಸಸಿಧರನ್ ನೇತೃತ್ವದ ತಂಡದಿಂದ ದಾಳಿಯ ಸಮಯದಲ್ಲಿ ವಶಪಡಿಸಿಕೊಳ್ಳಲಾಗಿದೆ. ಗೋವರ್ಧನ್ ಅವರ ಆಭರಣ ಮಳಿಗೆಯಿಂದ ೪೦೦ ಗ್ರಾಂ ಚಿನ್ನವನ್ನು ಎಸ್‌ಐಟಿ ವಶಪಡಿಸಿಕೊಂಡಿದೆ. ಮತ್ತೊಂದೆಡೆ ನಡೆದ ಕಾರ್ಯಾಚರಣೆಯಲ್ಲಿ ತನಿಖಾಧಿಕಾರಿಗಳು ತಿರುವನಂತಪುರಂನ ಪುಲಿಮಠದಲ್ಲಿರುವ ಉನ್ನಿಕೃಷ್ಣನ್ ಅವರ ನಿವಾಸದಿಂದ ಹಲವು ಚಿನ್ನದ ನಾಣ್ಯಗಳು ಮತ್ತು ಸುಮಾರು ೨ ಲಕ್ಷ ರೂಪಾಯಿ ನಗದನ್ನು ವಶಪಡಿಸಿಕೊಂಡಿದ್ದಾರೆ. ತನಿಖೆ ಕೇರಳ ಮೀರಿ ವಿಸ್ತರಿಸಿದ್ದು, ಕದ್ದ ಚಿನ್ನವನ್ನು ಪತ್ತೆ ಹಚ್ಚಲು ತನಿಖಾ ತಂಡ ಬೆಂಗಳೂರು, ಬಳ್ಳಾರಿ, ಹೈದರಾಬಾದ್ ಮತ್ತು ಚೆನ್ನೈನ ಅನೇಕ ಸ್ಥಳಗಳಿಗೆ ಭೇಟಿ ನೀಡಿ, ಪರಿಶೀಲನೆ ನಡೆಸಿದೆ.

<><><><>

ವೈದ್ಯಕೀಯ ವಿದ್ಯಾರ್ಹತೆ ಇಲ್ಲದೆ ಅಕ್ರಮವಾಗಿ ವೈದ್ಯಕೀಯ ಚಟುವಟಿಕೆ ನಡೆಸುತ್ತಿದ್ದವರ ವಿರುದ್ಧ ಕೋಲಾರ ಜಿಲ್ಲಾಡಳಿತ ಕಠಿಣ ಕ್ರಮ ಕೈಗೊಂಡಿದೆ. ಇತ್ತೀಚೆಗೆ ಪತ್ತೆಯಾದ ಏಳು ಕ್ಲಿನಿಕ್‌ಗಳಲ್ಲಿ ಮೂವರ ನೋಂದಣಿ ರದ್ದುಪಡಿಸಿದ್ದು ನೋಂದಣಿಯಿಲ್ಲದೆ ಕಾರ್ಯ ನಿರ್ವಹಿಸುತ್ತಿದ್ದ ನಾಲ್ಕು ಅನಧಿಕೃತ ಕ್ಲಿನಿಕ್‌ಗಳಿಗೆ ದಂಡ ವಿಧಿಸಿ, ಅವುಗಳ ವೈದ್ಯಕೀಯ ಸೇವೆಯನ್ನು ತಕ್ಷಣ ಸ್ಥಗಿತಗೊಳಿಸಲು ಆದೇಶಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಎಂ.ಆರ್.ರವಿ ತಿಳಿಸಿದ್ದಾರೆ. ಜಿಲ್ಲಾ ಕುಂದುಕೊರತೆಗಳ ನಿವಾರಣಾ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ವೈದ್ಯಕೀಯ ಅರ್ಹತೆ ಇಲ್ಲದೇ ಚಿಕಿತ್ಸೆ ನೀಡುವುದು ಅಪಾಯಕಾರಿ ಮತ್ತು ಕಾನೂನು ಬಾಹಿರವಾಗಿದೆ. ಜಿಲ್ಲೆಯಲ್ಲಿ ಒಟ್ಟು ೧೪೮ ನಕಲಿ ಕ್ಲಿನಿಕ್‌ಗಳನ್ನು ಗುರುತಿಸಲಾಗಿದ್ದು, ಪರಿಶೀಲನಾ ತಂಡಗಳು ೪೮ ಕ್ಲಿನಿಕ್‌ಗಳನ್ನು ಈಗಾಗಲೇ ವಶಪಡಿಸಿಕೊಂಡಿದೆ ಎಂದರು. ಸುಮಾರು ೬೦ ಕ್ಲಿನಿಕ್‌ಗಳ ನಕಲಿ ವೈದ್ಯರು ಪರಾರಿಯಾಗಿದ್ದು, ಇನ್ನು ೧೪ ಕ್ಲಿನಿಕ್‌ಗಳ ವಿರುದ್ಧ ನ್ಯಾಯಾಲಯದಲ್ಲಿ ಪ್ರಕರಣಗಳು ಮತ್ತು ೪ ಕ್ಲಿನಿಕ್‌ಗಳ ವಿರುದ್ಧ ಎಫ್‌ಐಆರ್ ದಾಖಲಾಗಿದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದರು.

<><><><>

ಭಾರತೀಯ ಕರಾವಳಿ ಕಾವಲು ಪಡೆ ವತಿಯಿಂದ, ಉತ್ತರಕನ್ನಡ ಜಿಲ್ಲೆ ಅಂಕೋಲಾದ ಬೆಳಂಬಾರದಲ್ಲಿ ಮೀನುಗಾರರಿಗೆ ಸಮುದ್ರದಲ್ಲಿ ತುರ್ತು ಪರಿಸ್ಥಿತಿಯನ್ನು ಎದುರಿಸುವ ಕುರಿತು ಜಾಗೃತಿ ಕಾರ್ಯಕ್ರಮ ನಡೆಸಲಾಯಿತು. ಸಮುದ್ರದಲ್ಲಿ ಮೀನುಗಾರಿಕೆಗೆ ತೆರಳುವಾಗ ಜೀವರಕ್ಷಕ ಜಾಕೆಟ್ ಬಳಸುವಿಕೆ, ದೋಣಿಗಳಲ್ಲಿ ತುರ್ತು ಜೀವರಕ್ಷಕ ಸಾಧನಗಳ ವ್ಯವಸ್ಥೆ ಮಾಡಿಕೊಳ್ಳುವುದು, ಜೆಲ್ಲಿ ಫಿಶ್ ಮೊದಲಾದ ವಿಷಕಾರಿ ಮೀನುಗಳ ಸ್ಪರ್ಶ, ಕಡಿತ ಮತ್ತಿತರ ಕಾರಣಗಳಿಂದ ಅಲರ್ಜಿ, ಉಸಿರಾಟದ ಸಮಸ್ಯೆ, ಗಾಯ ನೋವುಗಳಾದಾಗ ಕೆಲ ಅಗತ್ಯ ತುರ್ತು ಉಪಚಾರ ಮತ್ತು ವೈದ್ಯರ ಸಲಹೆ ಪಡೆದು ಅಗತ್ಯ ಚಿಕಿತ್ಸೆ ಪಡೆದುಕೊಳ್ಳುವುದು ಮುಂತಾದ ಅತ್ಯವಶ್ಯಕ ವಿಷಯಗಳ ಕುರಿತಂತೆ ಕಾವಲುಪಡೆ ಅಧಿಕಾರಿಗಳು ಪ್ರಾತ್ಯಕ್ಷಿಕೆ ಮೂಲಕ ಮಾಹಿತಿ ನೀಡಿದರು. ಆಕಸ್ಮಿಕ ಅವಘಡಗಳು ಸಂಭವಿಸಿದಾಗ ಯಾವ ರೀತಿಯಲ್ಲಿ ಪ್ರಥಮ ಚಿಕಿತ್ಸೆ ನೀಡಬೇಕು, ಹಾಗೂ ತುರ್ತು ಸಹಾಯವಾಣಿಗೆ ಸಂಪರ್ಕಿಸುವ ಕ್ರಮಗಳ ಕುರಿತು ಮಾಹಿತಿ ನೀಡಲಾಯಿತು.

<><><><>

ಬೆಂಗಳೂರು ನಗರದ ಕೆ.ಆರ್.ಪುರ ವಿಧಾನಸಭಾ ಕ್ಷೇತ್ರದ ತ್ರಿವೇಣಿನಗರದಲ್ಲಿ ದೊಡ್ಡ ಪ್ರಮಾಣದ ಸಿಲಿಂಡರ್ ಸ್ಫೋಟ ಸಂಭವಿಸಿದ್ದು, ಕನಿಷ್ಠ ಓರ್ವ ವೃದ್ಧೆ ಸಾವನ್ನಪ್ಪಿರುವ ಕುರಿತು ವರದಿಯಾಗಿದೆ. ಘಟನೆಯಲ್ಲಿ ಮೂವರಿಗೆ ಗಂಭೀರ ಗಾಯಗಳಾಗಿದ್ದು, ಮನೆಗೆ ಭಾರಿ ಹಾನಿಯಾಗಿದೆ. ಸ್ಫೋಟ ಸಂಭವಿಸಿದ ಸ್ಥಳಕ್ಕೆ ಭೇಟಿ ನೀಡಿದ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಘಟನೆ ಕುರಿತು ಸಮಗ್ರ ತನಿಖೆ ನಡೆಸಬೇಕು ಎಂದು ಆಗ್ರಹಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆ.ಆರ್.ಪುರ ವಿಧಾನಸಭಾ ಕ್ಷೇತ್ರದ ತ್ರಿವೇಣಿನಗರದಲ್ಲಿ ಇಂದು ಬೆಳಿಗ್ಗೆ ಸ್ಫೋಟ ಸಂಭವಿಸಿ ಮಹಿಳೆಯೊಬ್ಬರು ಮೃತಪಟ್ಟಿದ್ದಾರೆ. ಮನೆ ಪೂರ್ತಿ ಹಾನಿಗೆ ಒಳಗಾಗಿದೆ. ಸತ್ಯ ಹೊರಬರಲು ಅತ್ಯಂತ ಪ್ರಾಮಾಣಿಕವಾಗಿ ವಿಧಿವಿಜ್ಞಾನ ವರದಿ ಲಭಿಸಬೇಕು ಮತ್ತು ಮೃತರ ಕುಟುಂಬಸ್ಥರಿಗೆ ಸರಕಾರವು ತಕ್ಷಣ ಪರಿಹಾರ ನೀಡುವ ಜೊತೆಗೆ ಗಾಯಾಳುಗಳಿಗೆ ಉಚಿತವಾದ ಚಿಕಿತ್ಸೆಯನ್ನು ಒದಗಿಸಬೇಕು ಎಂದು ತಿಳಿಸಿದರು. ಅಕ್ಕಪಕ್ಕದ ಮನೆಗಳಿಗೆ ಆದ ಹಾನಿಯ ನಷ್ಟವನ್ನೂ ಭರಿಸುವಂತೆ ಅವರು ಕೋರಿದರು.

<><><><>

ದೇಶದ ಪ್ರಮುಖ ನೀತಿ ನಿರೂಪಣಾ ಸಂಸ್ಥೆಯಾದ ನೀತಿ ಆಯೋಗವು, ರಾಜ್ಯ ಸರ್ಕಾರ ಹಾಗೂ ಬೆಂಗಳೂರು ಜಲಮಂಡಳಿ ಸಹಯೋಗದಲ್ಲಿ ಶುದ್ಧೀಕರಿಸಿದ ತ್ಯಾಜ್ಯ ನೀರಿನ ಮರುಬಳಕೆ ಕುರಿತು, ಎರಡು ದಿನಗಳ ರಾಷ್ಟ್ರೀಯ ಕಾರ್ಯಾಗಾರವನ್ನು ಆಯೋಜಿಸಿದೆ. ನವೆಂಬರ್ ೬ ಮತ್ತು ೭ ರಂದು ಈ ಎರಡು ದಿನಗಳ ಕಾರ್ಯಾಗಾರ ನಡೆಯಲಿದ್ದು, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಾರ್ಯಾಗಾರಕ್ಕೆ ಚಾಲನೆ ನೀಡಲಿದ್ದಾರೆ. ದೇಶದ ವಿವಿಧ ರಾಜ್ಯಗಳ ಉನ್ನತಾಧಿಕಾರಿಗಳು, ಜಲ ತಜ್ಞರು ಮತ್ತು ಕೈಗಾರಿಕಾ ಮುಖಂಡರು ಕಾರ್ಯಾಗಾರದಲ್ಲಿ ಭಾಗವಹಿಸಲಿದ್ದು, ಶುದ್ಧೀಕರಿಸಿದ ನೀರನ್ನು ಗರಿಷ್ಠ ಪ್ರಮಾಣದಲ್ಲಿ ಮರುಬಳಕೆ ಮಾಡಲು ರಾಷ್ಟ್ರೀಯ ಯೋಜನೆ ರೂಪಿಸುವ ನಿಟ್ಟಿನಲ್ಲಿ ಚರ್ಚೆ ನಡೆಯಲಿದೆ. ಈ ಕುರಿತು ಮಾಹಿತಿ ನೀಡಿರುವ ಬೆಂಗಳೂರು ಜಲಮಂಡಳಿ ಅಧ್ಯಕ್ಷ ಡಾ. ರಾಮ್‌ಪ್ರಸಾತ್ ಮನೋಹರ್, ಬ್ರ್ಯಾಂಡ್ ಬೆಂಗಳೂರು ಅಭಿಯಾನದ ಅಡಿಯಲ್ಲಿ ತ್ಯಾಜ್ಯ ನೀರಿನ ಸಮರ್ಪಕ ಬಳಕೆಗೆ ಒತ್ತು ನೀಡಲಾಗಿದೆ. ಬೆಂಗಳೂರು ನಗರ ಶೇಕಡಾ ೯೦ ರಷ್ಟು ಒಳಚರಂಡಿ ಶುದ್ದೀಕರಣ ಸಾಮರ್ಥ್ಯ ಹೊಂದಿದ್ದು, ೧ ಸಾವಿರದ ೩೪೮ ಎಂ.ಎಲ್.ಡಿ ಯಷ್ಟು ನೀರನ್ನು ಶುದ್ದೀಕರಿಸಲಾಗುತ್ತಿದೆ. ಈ ನೀರನ್ನು ಸಮರ್ಪಕವಾಗಿ ಬಳಸಿಕೊಳ್ಳುವ ಮೂಲಕ ಕೆರೆಗಳನ್ನು ತುಂಬಿಸಲಾಗುತ್ತಿದೆ. ಅಲ್ಲದೇ, ಉದ್ಯಾನವಗಳ ನಿರ್ವಹಣೆ ಜೊತೆಯಲ್ಲಿಯೇ ಕೈಗಾರಿಕೆಗಳಿಗೂ ಪೂರೈಸಲಾಗುತ್ತಿದೆ ಎಂದು ಹೇಳಿದರು.

<><><><>

ದಾವಣಗೆರೆಯ ಶಾಲಾ ಮಕ್ಕಳಿಗಾಗಿ ಬೆಂಗಳೂರಿನ ಪಿಇಎಸ್ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಅಭಿನಯಿಸಿದ ಯುಗ ಪುರುಷ ಆಲ್ಬರ್ಟ್ ಐನ್‌ಸ್ಟೈನ್ ನಾಟಕ ಪ್ರದರ್ಶನವನ್ನು ಬೆಂಗಳೂರು ವಿಶ್ವವಿದ್ಯಾಲಯದ ವಿಶ್ರಾಂತ ಪ್ರಾಧ್ಯಾಪಕರು ಹಾಗೂ ಪರಮಾಣು ವಿಜ್ಞಾನಿ ಡಾ.ಕೆ.ಸಿದ್ದಪ್ಪ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ಪರಮಾಣು ಮತ್ತು ವಿದ್ಯುನ್ಮಾನ ವಿಜ್ಞಾನ ಕ್ಷೇತ್ರಕ್ಕೆ ಆಲ್ಬರ್ಟ್ ಐನ್ ಸ್ಟೈನ್ ನೀಡಿದ ಕೊಡುಗೆ ಶಾಶ್ವತವಾಗಿರುತ್ತದೆ.

ಪ್ರತಿಭಾವಂತ ವಿಜ್ಞಾನಿಯಾಗಿದ್ದ ಐನ್‌ಸ್ಟೈನ್‌ರ ಸಂಶೋಧನೆಗಳು ಭಾರತದ ರಕ್ಷಣಾ ವ್ಯವಸ್ಥೆಗೆ ಬುನಾದಿ ಹಾಕಿದೆ. ಇಂದಿನ ಬಾಹ್ಯಾಕಾಶ ಸಂಶೋಧನೆಯಲ್ಲೂ ಅವರ ಸಂಶೋಧನೆಗಳು ಮುಖ್ಯವಾಗಿ ಬಳಕೆಯಾಗುತ್ತಿವೆ ಎಂದರು. ದಾವಣಗೆರೆಯಲ್ಲಿನ ವಿವಿಧ ಶಾಲಾಮಕ್ಕಳಿಗೆ ಇಂದು ಮತ್ತು ನಾಳೆ ನಾಟಕ ಪ್ರದರ್ಶನ ನಡೆಯಲಿದೆ.

<><><>

ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ ಆಕಾಶವಾಣಿಯ ತಮ್ಮ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ದೇಶ ಮತ್ತು ವಿದೇಶಗಳ ಭಾರತೀಯರೊಂದಿಗೆ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಅವರ ಮಾಸಿಕ ರೇಡಿಯೋ ಕಾರ್ಯಕ್ರಮದ ೧೨೭ನೇ ಸಂಚಿಕೆಯಾಗಲಿದೆ. ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ. ಅಲ್ಲದೆ ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲೂ ಆಕಾಶವಾಣಿ ಈ ಕಾರ್ಯಕ್ರಮವನ್ನು ಪ್ರಸಾರ ಮಾಡಲಿದೆ.

<><><>

ಮೂರ್ನಾಡುವಿನಲ್ಲಿ ಮಡಿಕೇರಿಯ ರೋಟರಿ ವುಡ್ಸ್, ಕೊಡಗು ಔಷಧಿ ವ್ಯಾಪಾರಸ್ಥರ ಸಂಘ, ಮೂರ್ನಾಡು ಗ್ರಾಮಪಂಚಾಯತ್ ಮತ್ತು ಮೈಸೂರಿನ ಭಾರತ್ ಕ್ಯಾನ್ಸರ್ ಆಸ್ಪತ್ರೆ ವತಿಯಿಂದ ಆಯೋಜಿತ ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರವನ್ನು ಕೊಡಗು ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಬಾರಿಕೆ ದಿನೇಶ್ ಉದ್ಘಾಟಿಸಿದರು. ನಂತರ ಮಾತನಾಡಿದ ಅವರು, ನಮ್ಮ ದೇಹವೇ ದೇಗುಲವಾಗಿದ್ದು, ನಿಯಮಿತವಾದ ಆಹಾರ ಸೇವನೆ, ವ್ಯಾಯಾಮ, ಸೂಕ್ತ ಆರೋಗ್ಯ ತಪಾಸಣೆ ಮೂಲಕ ಅದನ್ನು ಆರೋಗ್ಯಕರವಾಗಿಟ್ಟುಕೊಳ್ಳಬೇಕು ಎಂದು ಅಭಿಪ್ರಾಯಪಟ್ಟರು.

<><> ಇಲ್ಲಿಗೆ ಪ್ರದೇಶ ಸಮಾಚರ ಮುಗಿಯಿತು <><>